ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

OBC ಇಲಾಖೆಯಿಂದ ನಡೆಸಿದ ಉಚಿತ ತರಬೇತಿ ಪರೀಕ್ಷೆ ಕುರಿತು

ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

1461 (1697) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2019ನೇ ಸಾಲಿನ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಉಚಿತ IAS/KAS/Bankingತರಬೇತಿಯ ಪರೀಕ್ಷೆ ಬರೆದ ಸಾವಿರಾರು ಬಡ ಹಾಗೂ ಪ್ರತಿಭಾನ್ವಿತ ವಿದ್ಯಾರ್ಥಿಗಳು ಅದರ ಫಲಿತಾಂಶಕ್ಕಾಗಿ ಜಾತಕ ಪಕ್ಷಿಗಳಂತೆ ಕಾಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸಮಾಜ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗಳಿಗೆ ಒಂದೇ ದಿನದಂದು ಪರೀಕ್ಷೆ ನಡೆಸಿರುವುದು ನಿಜವಲ್ಲವೇ ;

(ಇ) ಸಮಾಜ ಕಲ್ಯಾಣ ಇಲಾಖೆಯ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಫಲಿತಾಂಶವನ್ನು ಪ್ರಕಟಿಸಿದ್ದು, ಪ್ರಸ್ತುತ ಉಚಿತ ತರಬೇತಿಯಲ್ಲಿ ನಿರತರಾಗಿದ್ದು, OBC ಅಭ್ಯರ್ಥಿಗಳ ಫಲಿತಾಂಶವನ್ನು ಮಾತ್ರ ಪ್ರಕಟಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ; ಹಾಗೂ ಈ ವಿಳಂಬ ನೀತಿಯನ್ನು ಅನುಸರಿಸಲು ಕಾರಣವೇನು ? (ವಿವರ ನೀಡುವುದು)